ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

# 7 ಕುರ್ಚಿ, 20 ಕರ್ಚೀಫ್

## ಏಳು ಸ್ಥಾನಗಳಿಗೆ 20ಕ್ಕೂ ಹೆಚ್ಚು ಮಂದಿ ಲಾಬಿ । ಕೆಲವರಿಗೆ ಗೇಟ್‌ಪಾಸ್? ನಾಳೆ ನೂತನ ಸಚಿವರಿಗೆ ಪ್ರಮಾಣ ಸಾಧ್ಯತೆ। ಒತ್ತಡ ರಾಜಕಾರಣ ಶುರು

**ಬೆಂಗಳೂರು:** ಸಚಿವ ಸಂಪುಟ ವಿಸ್ತರಣೆಗೆ ಗ್ರೀನ್ ಸಿಗ್ನಲ್ ಸಿಕ್ಕ ಬೆನ್ನಲ್ಲೇ ಸಚಿವಾಕಾಂಕ್ಷಿಗಳ ಪಟ್ಟಿ ದೊಡ್ಡದಾಗುತ್ತಿದೆ. ಖಾಲಿ ಇರುವ ಏಳು ಸ್ಥಾನಗಳನ್ನು ಭರ್ತಿ ಮಾಡುವುದಾಗಿ ಮುಖ್ಯಮಂತ್ರಿ ಹೇಳಿಕೆ ನೀಡಿದ ಮೇಲೆ , ಇಪ್ಪತ್ತಕ್ಕೂ ಹೆಚ್ಚು ಆಕಾಂಕ್ಷಿಗಳು ತಮ್ಮದೇ ಆದ ರೀತಿಯಲ್ಲಿಸಂಪುಟ ಸೇರಲು ಒತ್ತಡ ಹೇರುವ ಪ್ರಯತ್ನ ನಡೆಸುತ್ತಿದ್ದಾರೆ. ಇದೇ ವೇಳೆ ಜ.13ರಂದು ನೂತನ ಸಚಿವರಿಗೆ ಪ್ರಮಾಣ ವಚನ ಬೋಧಿಸುವ ಸಾಧ್ಯತೆಗಳು ಇವೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸಚಿವ ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಬಗ್ಗೆ ಅಡ್ಡಗೋಡೆ ಮೇಲೆ ದೀಪ ಇಟ್ಟಂತೆ ಹೇಳಿಕೆ ನೀಡಿರುವುದರಿಂದ ಕೆಲವು ಸಚಿವರಲ್ಲಿ ಸ್ಥಾನ ಕಳೆದುಕೊಳ್ಳುವ ಆತಂಕ ಮನೆ ಮಾಡಿದೆ. ಆದರಂತೆ ವಿಸ್ತರಣೆ ಅಥವಾ ಪುನಾರಚನೆ ಬಗ್ಗೆ ಹೈಕಮಾಂಡ್ ನಿರ್ಧಾರದ ಮೇಲೆ ಸಚಿವಾಕಾಂಕ್ಷಿಗಳ ಮತ್ತು ಸ್ಥಾನ ಉಳಿಸಿಕೊಳ್ಳುವ ಸಚಿವರಿಂದ ಒತ್ತಡ ರಾಜಕಾರಣ ಆರಂಭವಾಗಿದೆ.

ನನ್ನ ಖಾತೆ ಬದಲಾವಣೆ ವಿಚಾರ ಗೊತ್ತಿಲ್ಲ ಎಂದು ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಹೇಳಿದರೆ, ಅಗತ್ಯ ಬಿದ್ದಲ್ಲಿ ಸಚಿವ ಸ್ಥಾನ ತ್ಯಾಗಕ್ಕೆ ಸಿದ್ಧ ಎಂದು ಅರಣ್ಯ ಸಚಿವ ಆನಂದ ಸಿಂಗ್ ಹೇಳಿದ್ದಾರೆ.

ಈ ನಡುವೆ, ಸಂಪುಟ ವಿಸ್ತರಣೆಗೆ ಅನುಮತಿ ದೊರೆತನಂತರ ಸಚಿವಾಕಾಂಕ್ಷಿಗಳು ತಮ್ಮ ಸೇರ್ಪಡೆಗೆ ಜಿಲ್ಲೆ, ಜಾತಿ, ಹಿರಿತನ, ಪಕ್ಷ ನಿಷ್ಠೆಯ ಲೆಕ್ಕಾಚಾರದಲ್ಲಿ ಸಂಪುಟ ಸೇರುವ ಕಸರತ್ತು ನಡೆಸಿದ್ದಾರೆ. ಮುಖ್ಯಮಂತ್ರಿ ಯಡಿಯೂರಪ್ಪ ಲೆಕ್ಕಾಚಾರದಲ್ಲಿ ವಲಸೆ ಬಂದವರಲ್ಲಿ ವಿಧಾನ ಪರಿಷತ್ ಸದಸ್ಯರಾದ ಎಂ.ಟಿ.ಬಿ. ನಾಗರಾಜ್, ಆರ್. ಶಂಕರ್ ಹಾಗೂ ಶಾಸಕ ಮುನಿರತ್ನ ಅವರಿಗೆ ಅವಕಾಶ ಕಲ್ಪಿಸಿಕೊಡಲು ನಿರ್ಧರಿಸಿದ್ದಾರೆ ಎನ್ನಲಾಗುತ್ತಿದೆ. ಹಿರಿಯ ಶಾಸಕ ಉಮೇಶ್ ಕತ್ತಿ ಅವರಿಗೂ ಅವಕಾಶ ನೀಡಲು ಮುಖ್ಯಮಂತ್ರಿ ನಿರ್ಧರಿಸಿದ್ದಾರೆ ಎಂದು ತಿಳಿದು ಬಂದಿದೆ.

ಏಳು ಸಚಿವ ಸ್ಥಾನಗಳು ಖಾಲಿಯಿದ್ದು ಆಕಾಂಕ್ಷಿಗಳ ಪಟ್ಟಿ ದೊಡ್ಡದಾಗಿದೆ. ಮುನಿರತ್ನ, ಎಂ.ಟಿ.ಬಿ. ನಾಗರಾಜ್, ಆರ್.ಶಂಕರ್, ಉಮೇಶ್‌ಕತ್ತಿ, ಅರವಿಂದ ಲಿಂಬಾವಳಿ, ಎಚ್. ವಿಶ್ವನಾಥ್, ಹಾಲಪ್ಪ ಆಚಾರ್, ಅರವಿಂದ ಬೆಲ್ಲದ್, ತಿಪ್ಪಾರೆಡ್ಡಿ, ಪೂರ್ಣಿಮಾ ಶ್ರೀನಿವಾಸ್, ಎಸ್.ಎ. ರಾಮದಾಸ್, ಎಸ್.ಅಂಗಾರ, ಸುನಿಲ್‌ಕುಮಾರ್, ರೇಣುಕಾಚಾರ್ಯ, ರಾಜುಗೌಡ, ದತ್ತಾತ್ರೇಯ ಪಾಟೀಲ ರೇವೂರ, ಮುರುಗೇಶ ನಿರಾಣಿ, ಬಸವರಾಜ ಪಾಟೀಲ್ ಯತ್ನಾಳ್, ಎ.ಎಸ್. ಪಾಟೀಲ ನಡಹಳ್ಳಿ, ಪರಣ್ಣ ಮುನವಳ್ಳಿ.. ಹೀಗೆ ಆಕಾಂಕ್ಷಿಗಳ ಪಟ್ಟಿ ದೊಡ್ಡದಾಗುತ್ತಲೇ ಇದೆ. ಸಚಿವ ಸ್ಥಾನ ನೀಡಿದರೆ ಒಂದು ಕೈನೋಡೋಣ ಎಂಬ ಅಭಿಪ್ರಾಯ ಇವರೆಲ್ಲರದು.

ಸಚಿವಾಕಾಂಕ್ಷಿಗಳಲ್ಲಿ ಶಾಸಕರಾದ ಎಸ್. ಅಂಗಾರ, ಸುನಿಲ್ ಕುಮಾರ್, ಅರವಿಂದ ಲಿಂಬಾವಳಿ, ಪೂರ್ಣಿಮಾ ಶ್ರೀನಿವಾಸ್, ಹಾಲಪ್ಪ ಆಚಾರ್, ತಿಪ್ಪಾರೆಡ್ಡಿ ಹೆಸರುಗಳು ಮುಂಚೂಣಿಯಲ್ಲಿ ಕೇಳಿ ಬರುತ್ತಿವೆ.

▸ 8ನೇ ಪುಟಕ್ಕೆ



### ಅರುಣ್ ಬರ್ತಾರೆ

ಸಂಪುಟ ವಿಸ್ತರಣೆಗೆ ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಬರುವುದು ಖಚಿತವಾಗಿದೆ ಎಂದು ಬಿಜೆಪಿ ಉಪಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಚಿವ ಸಂಪುಟ ವಿಸ್ತರಣೆಗೆ ಕಾಲ ಕೂಡಿ ಬಂದಿದೆ. ಸಚಿವ ಸಂಪುಟ ವಿಸ್ತರಣೆ ಆಗಬೇಕೆಂಬ ಕೂಗಿತ್ತು. ಹೈಕಮಾಂಡ್ ಕೂಡ ಒಪ್ಪಿಗೆ ನೀಡಿದೆ. ಇದೇ ವೇಳೆ, ತಾವು ವೈಯಕ್ತಿಕ ಕೆಲಸದ ಮೇಲೆ ದೆಹಲಿಗೆ ತೆರಳಿದ್ದು, ಯಾವುದೇ ರಾಜಕೀಯ ವಿಷಯದ ಬಗ್ಗೆ ಚರ್ಚೆಗೆ ತೆರಳಿರಲಿಲ್ಲ ಎಂದು ಹೇಳಿದರು.

### ಕಟೀಲ್ ಜತೆ ಚರ್ಚಿಸಿ ಅಂತಿಮ ಪಟ್ಟಿ

ನೂತನ ಸಚಿವರಾಗುವವರ ಬಗ್ಗೆ ಹೈಕಮಾಂಡ್ ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಅವರೊಂದಿಗೆ ಚರ್ಚಿಸಿ ಅಂತಿಮ ಪಟ್ಟಿ ಕಳುಹಿಸುವುದಾಗಿ ಹೇಳಿದೆ ಎನ್ನಲಾಗಿದ್ದು, ಮಂಗಳವಾರ ಸಂಜೆ ಅಥವಾ ಬುಧವಾರ ಬೆಳಗ್ಗೆ ಅಧಿಕೃತ ಪಟ್ಟಿ ಬಿಡುಗಡೆಯಾಗುವ ಸಾಧ್ಯತೆ ಇದೆ. ಮುಖ್ಯಮಂತ್ರಿ ಯಡಿಯೂರಪ್ಪ ಜನವರಿ 13 ರಂದು ಸಂಜೆ 4 ಗಂಟೆ ಸುಮಾರಿಗೆ ಸಂಪುಟ ವಿಸ್ತರಣೆ ಮಾಡಲು ನಿರ್ಧರಿಸಿದ್ದಾರೆ ಎನ್ನಲಾಗಿದ್ದು, ಹೈಕಮಾಂಡ್‌ನಿಂದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಹಾಗೂ ಪಕ್ಷದ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಅವರಿಗೆ ಪ್ರಮಾಣ ವಚನ. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ನೀಡಿದ್ದಾರೆ. ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಪಾಲ್ಗೊಳ್ಳುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ.

ಜ. 13 ಅಥವಾ 14 ರಂದು ಸಂಪುಟ ವಿಸ್ತರಣೆ ನಿಶ್ಚಿತವಾಗಿದೆ. ಅದು ಪುನರ್ ರಚನೆಯೋ ಅಥವಾ ವಿಸ್ತರಣೆಯೋ ಎಂಬುದು ಅವತ್ತಿಗೆ ಗೊತ್ತಾಗಲಿದೆ.

• ಬಿ.ಎಸ್.ಯಡಿಯೂರಪ್ಪ ಸಿಎಂ

ಅವರನ್ನು ಮುಖ್ಯಮಂತ್ರಿ ಸ್ಥಾನಕ್ಕೆ ಕೂರಿಸಿದವರನ್ನು ನೆನಪು ಮಾಡಿಕೊಳ್ಳಬೇಕು. ಸಚಿವ ಸ್ಥಾನ ನೀಡಿ ಎಂದು ನಾನು ಕೇಳುವುದಿಲ್ಲ, ಮಾತನಾಡುವುದಿಲ್ಲ.

• ಎಚ್. ವಿಶ್ವನಾಥ್, ಎಂಎಲ್‌ಸಿ

ಉಪ ಚುನಾವಣೆ ವೇಳೆ ನನಗೆ ಸಚಿವ ಸ್ಥಾನ ನೀಡುವ ಭರವಸೆ ನೀಡಿದ್ದರು. ಅವರು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಾರೆ ಎನ್ನುವ ವಿಶ್ವಾಸ ಇದೆ.

• ಮುನಿರತ್ನ, ಶಾಸಕ.

ಬೆಂಗಳೂರಿನಿಂದ ನನಗೇನೂ ಕರೆ ಬಂದಿಲ್ಲ. ನಸೀಬು ಇದ್ದರೆ ಮಂತ್ರಿಯಾಗುತ್ತೇನೆ. ಇಲ್ಲದಿದ್ದರೂ ಶಾಸಕನಾಗಿ ನನ್ನ ಕೆಲಸ ಮುಂದುವರಿಸುತ್ತೇನೆ.

• ಉಮೇಶ್ ಕತ್ತಿ, ಶಾಸಕ.